**ಕರ್ನಾಟಕ ಲೋಕಾಯುಕ್ತ**

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.2562/2016/ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ||ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು,ದಿನಾಂಕ: 21.4.2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವಿವಿಧ ಗ್ರಾಮಗಳಲ್ಲಿ ಪರವಾನಿಗೆ ಇಲ್ಲದೆ ಅಕ್ರಮ ಮದ್ಯಮಾರಾಟ ಮಾಡುತ್ತಿದ್ದಾರೆಂದು ಆಪಾದಿಸಿದ್ದು, ಇದನ್ನು ಕಟ್ಟುನಿಟ್ಟಾಗಿ ತಡೆಗಟ್ಟಿ, ಯಾವುದೇ ಅಬಕಾರಿ ಅಧಿಕಾರಿಯು ಈ ಅಕ್ರಮ ಮದ್ಯ ಮಾರಾಟ ಮಾಡಲು ಸಹಕರಿಸುವುದು ಕಂಡುಬಂದರೆ ಅವರ ವಿರುದ್ದ ಸೂಕ್ತ ಕಾನೂನು ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಕೋರಿ.

*******

ಶ್ರೀ ಎಸ್. ಎಸ್.ಗಿರಿಯಪ್ಪ, ಸಿಂಗದಹಳ್ಳಿ ಗ್ರಾಮ, ಕಂಡಿಕೆರೆ ಹೋಬಳಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಜಗದೀಶ್, ಅಬಕಾರಿ ಉಪನಿರೀಕ್ಷಕರು, ಚಿಕ್ಕನಾಯಕನಹಳ್ಳಿ ತಾಲ್ಲೂಕು ಹಾಗೂ (2) ಶ್ರೀ ಅರುಣಕುಮಾರ್, ಅಬಕಾರಿ ವೃತ್ತ ನಿರೀಕ್ಷಕರು, ಚಿಕ್ಕನಾಯಕನಹಳ್ಳಿ ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ ಕ್ರಮವಾಗಿ 1 ಮತ್ತು 2ನೇ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕು ಸಿಂಗರಹಳ್ಳಿ ಗ್ರಾಮದಲ್ಲಿ ಮದ್ಯದ ಅಂಗಡಿಗೆ ಪರವಾನಿಗೆ ಇಲ್ಲದೆ ಶ್ರೀಮತಿ ಜಯಮಾಲ ಬಿನ್ ನರಸಿಂಹಮೂರ್ತಿ ಅವರು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ. ಎದುರುದಾರರು ಇವರಿಂದ ರೂ.20,000/-ಗಳ ಲಂಚ ಪಡೆದು ಅಕ್ರಮ ಮದ್ಯಮಾರಾಟ ಮಾಡಲು ಸಹಕರಿಸುತ್ತಿದ್ದಾರೆ. ಈ ಅಕ್ರಮ ಮದ್ಯ ಮಾರಾಟದಿಂದ ದಿನಕ್ಕೆ ರೂ.30,000/-ರಿಂದ 40,000/- ಗಳ ವ್ಯಾಪಾರ ವಿರುತ್ತದೆ. ಈ ಗ್ರಾಮವಲ್ಲದೆ ಪಕ್ಕದ ಬಸರಶಿಡ್ಲಹಳ್ಳಿ, ಮದನಮಡು, ಕಾತ್ರಿಕೆಹಾಲ್,ತೀರ್ಥಪುರ, ರಾಂಪುರ, ದೊಡ್ಡರಾಂಪುರ, ಚಿಕ್ಕರಾಂಪುರ,

ಹೊಸಹಟ್ಟಿ, ಇತ್ಯಾದಿ ಗ್ರಾಮಗಳಿಗೆ ಜಯಮಾಲ ಇವರಿಂದಲೇ ಮದ್ಯ ಸರಬರಾಜು ಆಗುತ್ತದೆ. ಆದ್ದರಿಂದ ಈ ಬಗ್ಗೆ ತನಿಖೆ ಮಾಡಿ ಎದುರುದಾರರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

3. 1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ, ತಮ್ಮ ವಲಯ ವ್ಯಾಪ್ತಿಯಲ್ಲಿ ಅಬಕಾರಿ ಅಕ್ರಮಗಳು ಕಂಡುಬಂದ ಸಮಯದಲ್ಲಿ 18 ಸನ್ನದು ಷರತ್ತು ಉಲ್ಲಂಘಿಸಿದ ಪ್ರಕರಣಗಳಾದ ಬಿ.ಎಲ್.ಸಿ ಮತ್ತು 5 ಎಂ.ಆರ್.ಪಿ. ಕೇಸು ದಾಖಲು ಮಾಡಲಾಗಿರುತ್ತದೆ. ಸಾರ್ವಜನಿಕ ಸ್ಥಳದಲ್ಲಿ ಮದ್ಯ ಸೇವನೆಗೆ ಅವಕಾಶ ಕಲ್ಪಿಸಿದ 63 ಪ್ರಕರಣಗಳನ್ನು, 8 ಅಕ್ರಮ ಮದ್ಯ ಮಾರಾಟ ಮತ್ತು 2 ನಕಲಿ ಮದ್ಯದ ಪ್ರಕರಣಗಳ ಆರೋಪಿತರನ್ನು ಪತ್ತೆ ಹಚ್ಚಿ ಪ್ರಕರಣ ದಾಖಲಿಸಲಾಗಿರುತ್ತದೆ. ದೂರುದಾರರು ನೀಡಿರುವ ದೂರಿನನ್ವಯ ಗ್ರಾಮಕ್ಕೆ ಭೇಟಿ ನೀಡಿ ಜಯಮಾಲ ಅವರ ಪೆಟ್ಟಿಗೆ ಅಂಗಡಿ ಮೇಲೆ ದಾಳಿ ನಡೆಸಿದಾಗ ಯಾವುದೇ ಅಕ್ರಮಗಳು ಕಂಡುಬಂದಿರುವುದಿಲ್ಲ. ದೂರುದಾರರು ದಿ.8.8.2016ರಂದು ತಾನು ದಲಿತ ಸಂಘರ್ಷ ಸಮಿತಿ ತಾಲ್ಲೂಕು ಘಟಕದ ಅಧ್ಯಕ್ಷನೆಂದು ಪರಿಚಯಿಸಿಕೊಂಡು ಮಾಸಿಕ ರೂ.1000/- ಲಂಚ ನೀಡುವಂತೆ ಕೇಳಿದ್ದು, ಅದನ್ನು ತಿರಸ್ಕರಿಸಿದಾಗ, ಈ ರೀತಿ ಪ್ರಕರಣ ದಾಖಲಿಸಿದ್ದು ಕಂಡುಬರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರುದಾರರು ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ಮಾಡಲು ಎದುರುದಾರರು ಲಂಚ ಸ್ವೀಕರಿಸಿ ಅವಕಾಶ ಮಾಡಿಕೊಟ್ಟಿರುತ್ತಾರೆಂದು ಆಪಾದಿಸಿದ್ದು, ಆದರೆ ಈ ಆಪಾದನೆಗಳನ್ನು ಎದುರುದಾರರು ಅಲ್ಲಗಳೆದಿರುತ್ತಾರೆ. ದೂರುದಾರರು ತಮ್ಮ ಅಪಾದನೆ ರುಜುವಾತುಪಡಿಸಲು ಯಾವುದೇ ದಾಖಲೆ ಲಗತ್ತಿಸಿರುವುದಿಲ್ಲ. ಕೇವಲ ದೂರು ನೀಡಿದ ಆಧಾರದ ಮೇಲೆ ಎದುರುದಾರರು ಲಂಚ ಸ್ವೀಕರಿಸಿ ಅಕ್ರಮ ಮದ್ಯ ಮಾರಾಟಮಾಡಲು ಸಹಕರಿಸಿದ್ದಾರೆಂದು ಅಭಿಪ್ರಾಯಕ್ಕೆ ಬರಲಾಗುವುದಿಲ್ಲ.

6. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವಿವಿಧ ಗ್ರಾಮಗಳಲ್ಲಿ ಪರವಾನಿಗೆ ಇಲ್ಲದೆ ಅಕ್ರಮ

ಮದ್ಯಮಾರಾಟ ಮಾಡುತ್ತಿದ್ದಾರೆಂದು ಆಪಾದಿಸಿದ್ದು, ಇದನ್ನು ಕಟ್ಟುನಿಟ್ಟಾಗಿ ತಡೆಗಟ್ಟಿ, ಯಾವುದೇ ಅಬಕಾರಿ ಅಧಿಕಾರಿಯು ಈ ಅಕ್ರಮ ಮದ್ಯ ಮಾರಾಟ ಮಾಡಲು ಸಹಕರಿಸುವುದು ಕಂಡುಬಂದರೆ ಅವರ ವಿರುದ್ಧ ಸೂಕ್ತ ಕಾನೂನು ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

7. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

24/4/17

[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

21/4